**1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿ.ಸಂಖ್ಯೆಃ 23/2019**

**ಪಿರ್ಯಾದಿ** ಃ ಸರ್ಕಾರದ ಪರಃ ಕವಲಂದೆ ಪೊಲೀಸರು

**ವಿರುದ್ಧ**

**ಆರೋಪಿತರು** ಃ 1. ಮಹದೇವಪ್ಪ ಬಿನ್ ಚಂದ್ರಪ್ಪ, 25 ವರ್ಷ,
2. ಪ್ರೇಮಮ್ಮ ಕೋಂ ಚಂದ್ರಪ್ಪ, 55 ವರ್ಷ
ಇಬ್ಬರ ವಾಸ ಕಾರೇಪುರ ಗ್ರಾಮ, ನಂಜನಗೂಡು ತಾಲ್ಲೂಕು,

**ದೋಷಾರೋಪಣೆ**

ಶ್ರೀನಾಥ್.ಎ, 1 ನೇ ಹೆಚ್ಚುವರಿ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಧೀಶನಾದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ:-

ದಿನಾಂಕಃ 08.09.2018 ರಂದು ಸಂಜೆ 04.45 ಗಂಟೆ ಸಮಯದಲ್ಲಿ ಕವಲಂದೆ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಕಾರೇಪುರ ಗ್ರಾಮದಲ್ಲಿ ಶಿವಪ್ಪ ಬಿನ್ ನಂಜುಂಡಪ್ಪರವರ ಜಮೀನಿನ ಮುಂಭಾಗ ಸರ್ಕಾರಿ ಓಣಿಯ ಬಳಿ ಆರೋಪಿತರಾದ ನೀವು ಸಮಾನ ಉದ್ದೇಶಹೊಂದಿ ಈ ಹಿಂದೆ ತಿರುಗಾಡುವ ಜಾಗದ ವಿಚಾರದಲ್ಲಿ ಗಲಾಟೆಯಾಗಿದ್ದ ವಿಚಾರದಲ್ಲಿ ದ್ವೇಷವಿಟ್ಟುಕೊಂಡು ಸಾಕ್ಷಿ-1 ರವರಿಗೆ ನೀನು ಇಲ್ಲಿ ಏಕೆ ಬರುತ್ತಿದ್ದೀಯಾ, ನೀನು ಬರಬೇಡ ಎಂದು ಜೋರಾಗಿ ಎಬ್ಬರೂ ಕೂಗಾಡುತ್ತಾ ಏಕಾಏಕಿ ಬೋಳಿಮಗನೆ ಸೂಳೆಮಗನೆ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನಮಾಡಿ ಶಾಂತಿಯನ್ನು ಭಂಗಮಾಡಿದ ಕಾರಣ ಭಾರತ ದಂಡ ಸಂಹಿತೆಯ ಕಲಂ 504 ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೇಯದಾಗಿ ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸಮಾನ ಉದ್ದೇಶಹೊಂದಿ 2 ನೇ ಆರೋಪಿತರಾದ ನೀವು ಸಾಕ್ಷಿ-1 ರವರನ್ನು ಮುಂದೆ ಹೋಗದಂತೆ ತಡೆದು ನಿಲ್ಲಿಸಿ ಅಕ್ರಮ ತಡೆಯನ್ನುಂಟುಮಾಡಿದ ಕಾರಣ ಭಾರತ ದಂಡ ಸಂಹಿತೆ ಕಲಂ 341 ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೇಯದಾಗಿ ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸಮಾನ ಉದ್ದೇಶಹೊಂದಿ 1 ನೇ ಆರೋಪಿತರಾದ ನೀವು ಏಕಾಏಕಿ ನಿಮ್ಮ ಕೈಗಳಿಂದ ಸಾಕ್ಷಿ-1 ರವರ ಎಡ ಹಾಗೂ ಬಲ ಮೊಣಕೈಗೆ ಹೊಡೆದು ಸ್ವಯಂ

ಪ್ರೇರಿತವಾಗಿ ನೋವುಂಟುಮಾಡಿದ ಕಾರಣ ಭಾರತ ದಂಡ ಸಂಹಿತೆ ಕಲಂ 323 ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ನಾಲ್ಕನೇಯದಾಗಿ ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸಮಾನ ಉದ್ದೇಶಹೊಂದಿ 1 ನೇ ಆರೋಪಿತರಾದ ನೀವು ಅಲ್ಲೇ ಬಿದ್ದಿದ್ದ ಕಲ್ಲನ್ನು ಎತ್ತಿಕೊಂಡು ಸಾಕ್ಷಿ-1 ರವರ ತಲೆಗೆ ಹೊಡೆದು ರಕ್ತಗಾಯಪಡಿಸಿ ಸ್ವಯಂ ಪ್ರೇರಿತವಾಗಿ ಸಾಮಾನ್ಯ ಸ್ವರೂಪದ ಗಾಯಗಳನ್ನುಂಟುಮಾಡಿದ ಕಾರಣ ಭಾರತ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೆಯದಾಗಿ ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸಮಾನ ಉದ್ದೇಶಹೊಂದಿ 1 ನೇ ಆರೋಪಿತರಾದ ನೀವು ಸಾಕ್ಷಿ-1 ರವರಿಗೆ ಮಗನೆ ನಿನ್ನನ್ನು ಇಷ್ಟಕ್ಕೆ ಬಿಡಲ್ಲ ತಿಥಿಮಾಡುತ್ತೇನೆಂದು ಕೊಲೆ ಬೆದರಿಕೆ ಹಾಕಿದ ಕಾರಣ ಭಾರತ ದಂಡ ಸಂಹಿತೆ ಕಲಂ 506 ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

**ಮೇಲ್ಕಂಡ ಆಪಾದನೆಗೆ ಆರೋಪಿಗಳಾದ ನಿಮ್ಮನ್ನು ನ್ಯಾಯಾಲಯದ ಅಧಿವಿಚಾರಣೆಯನ್ನು ಎದುರಿಸಬೇಕೆಂದು ಆದೇಶಿಸುತ್ತೇನೆ.**

ಸಹಿ/-

**ದಿನಾಂಕಃ 09.03.2021** 1 ನೇ ಹೆ.ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.

ನಂಜನಗೂಡು

**1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿ.ಸಂಖ್ಯೆಃ 23/2019**

**ಪಿರ್ಯಾದಿ** ಃ ಸರ್ಕಾರದ ಪರಃ ಕವಲಂದೆ ಪೊಲೀಸರು

**ವಿರುದ್ಧ**

**ಆರೋಪಿತರು** ಃ 1. ಮಹದೇವಪ್ಪ ಬಿನ್ ಚಂದ್ರಪ್ಪ, 25 ವರ್ಷ,
2. ಪ್ರೇಮಮ್ಮ ಕೋಂ ಚಂದ್ರಪ್ಪ, 55 ವರ್ಷ
ಇಬ್ಬರ ವಾಸ ಕಾರೇಪುರ ಗ್ರಾಮ, ನಂಜನಗೂಡು ತಾಲ್ಲೂಕು,

ಃ ಆಪಾದನೆ ಃ

ಪ್ರಶ್ನೆ1 ಃ ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ ?
ಉತ್ತರ ಃ

ಪ್ರಶ್ನೆ2 ಃ ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ?
ಉತ್ತರ ಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

ಸಹಿ/-

**ದಿನಾಂಕಃ 09.03.2021** 1 ನೇ ಹೆ.ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು